## 60. ಕರ್ತವ್ಯಕ್ಕೆ ಹಾಜರಾಗದ ಬಿಎಲ್‌ಒಗಳ ವಿರುದ್ಧ ಕ್ರಮಕ್ಕೆ ಸೂಚನೆ

ಪಶ್ಚಿಮ ವಿಭಾಗದಲ್ಲಿ ಕೋವಿಡ್–19 ಕರ್ತವ್ಯಕ್ಕೆ ಗೈರು ಹಾಜರಾಗುತ್ತಿರುವ ಬೂತ್ ಮಟ್ಟದ ಅಧಿಕಾರಿಗಳ ವಿರುದ್ಧ ಅತ್ಯುಗ್ರ ಕ್ರಮ ಕೈಗೊಳ್ಳುವಂತೆ ಬೆಂಗಳೂರು ಕೋವಿಡ್ ಕೇರ್ ಕೇಂದ್ರಗಳ ಉಸ್ತುವಾರಿಯೂ ಆಗಿರುವ ಉಪ ಮುಖ್ಯಮಂತ್ರಿ ಡಾ: ಸಿ.ಎನ್.ಅಶ್ವತ್ಥನಾರಾಯಣ ಆದೇಶಿಸಿದರಲ್ಲದೇ, ಗುತ್ತಿಗೆ ಆಧಾರಿತ ವೈದ್ಯರ ವೇತನ ಹೆಚ್ಚಿಸುವಂತೆ ಇದೇ ವೇಳೆ ಅವರು ಸೂಚಿಸಿದರು.

ನಗರದಲ್ಲಿ ಪಶ್ಚಿಮ ವಲಯದ ಕೋವಿಡ್ ಪರಿಸ್ಥಿತಿಯನ್ನು ಪರಿಶೀಲನೆ ನಡೆಸಿದ ಅವರು, ಈ ವಿಭಾಗದಲ್ಲಿ ಒಟ್ಟು 7,000 ಬೂತ್ ಮಟ್ಟದ ಅಧಿಕಾರಿಗಳಿದ್ದಾರೆ. ಆ ಪೈಕಿ ಕೇವಲ 1,200 ಅಧಿಕಾರಿಗಳಷ್ಟೇ ಕರ್ತವ್ಯಕ್ಕೆ ಹಾಜರಾಗುತ್ತಿದ್ದು, ಉಳಿದವರು ಎಲ್ಲಿ ಎಂದು ಹಿರಿಯ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಬೂತ್ ಮಟ್ಟದ ಅಧಿಕಾರಿಗಳ ಬಗ್ಗೆ ಸಿಕ್ಕಾಪಟ್ಟೆ ದೂರುಗಳು ಬರುತ್ತಿವೆ.

ಅನೇಕರು ಹಿರಿಯ ಅಧಿಕಾರಿಗಳಿಗೆ ವರದಿ ಮಾಡಿಕೊಂಡು ನಂತರ ಕರ್ತವ್ಯಕ್ಕೆ ಗೈರಾಗುತ್ತಿದ್ದಾರೆ. ಇದು ಅಕ್ಷಮ್ಯ ಅಪರಾಧ. ಬೂತ್ ಮಟ್ಟದಲ್ಲಿ ಆಶಾ ಕಾರ್ಯಕರ್ತೆಯರು ಮತ್ತು ಎಎನ್‌ಎಂಗಳ ಜೊತೆ ಸೇರಿ ಕೋವಿಡ್ ಸೋಂಕಿತರನ್ನು ಸಂಪರ್ಕಿಸುವುದು, ಕೋವಿಡ್ ಪರೀಕ್ಷೆಗೆ ವ್ಯವಸ್ಥೆ ಮಾಡುವುದು, ಜಾಗೃತಿ ಮೂಡಿಸುವುದು ಬಿಎಲ್‌ಒಗಳ ಕೆಲಸ. ಆದರೆ ಅವರು ಮಲ್ಲೇಶ್ವರ, ಗಾಂಧಿನಗರ, ರಾಜಾಜಿನಗರ, ಮಹಾಲಕ್ಷ್ಮಿ ಲೇಔಟ್, ವಿಜಯನಗರ, ಚಿಕ್ಕಪೇಟೆ ಕ್ಷೇತ್ರಗಳಲ್ಲಿ ಇವರು ಕರ್ತವ್ಯಲೋಪ ಎಸಗಿದ್ದಾರೆ. ಇವರ ವಿರುದ್ಧ ಅತ್ಯಂತ ಕಠಿಣ ಕ್ರಮ ಕೈಗೊಳ್ಳಿ ಹಾಗೂ ಅವರ ಸೇವಾ ದಾಖಲಾತಿಯಲ್ಲಿ ಲೋಪವೆಸಗಿರುವುದನ್ನು ದಾಖಲಿಸಿ ಎಂದು ಸಭೆಯಲ್ಲಿ ಹಾಜರಿದ್ದ ಪಶ್ಚಿಮ ವಿಭಾಗದ ಕೋವಿಡ್ ಉಸ್ತುವಾರಿ ಅಧಿಕಾರಿ ಉಜ್ವಲ್ ಕುಮಾರ್ ಘೋಷ್ ಹಾಗೂ ಬಿಬಿಎಂಪಿ ವಿಶೇಷ ಆಯುಕ್ತರಾದ ರಣದೀಪ್, ಡಾ:ಬಸವರಾಜು ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಖಾಸಗಿ ಆಸ್ಪತ್ರೆಗಳು ನಡೆಸುತ್ತಿರುವ ಕಳ್ಳಾಟಗಳು ಮತ್ತಷ್ಟು ಬಯಲಿಗೆ ಬಂದವು. ಬಿಬಿಎಂಪಿ ವೆಬ್ ತಾಣದಲ್ಲಿ ಖಾಸಗಿ ಆಸ್ಪತ್ರೆಗಳು ನೇರ ಲಿಂಕ್ ಆಗಿ ತಮ್ಮಲ್ಲಿರುವ ಖಾಲಿ ಹಾಸಿಗೆ, ಕೋವಿಡ್ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆ ಮತ್ತಿತರ ವಿಷಯಗಳ ರಿಯಲ್ ಟೈಮ್‌ನಲ್ಲಿ ಅಪ್‌ಲೋಡ್ ಮಾಡಬೇಕಾಗುತ್ತದೆ. ಆಗ ಆ ಮಾಹಿತಿಯು ಪಾಲಿಕೆ ವೆಬ್‌ನಲ್ಲಿಯೂ ಇರುತ್ತದೆ. ಸರ್ಕಾರದ ಎಚ್ಚರಿಕೆಗೆ ಮಣೆ ಹಾಕುತ್ತಿರುವಂತೆ ಕಳ್ಳಾಟ ಆಡುತ್ತಿರುವ ಖಾಸಗಿ ಆಸ್ಪತ್ರೆಗಳು ತಮ್ಮಲ್ಲಿ ಕೋವಿಡ್‌ಗೆ ಮೀಸಲಾದ ಹಾಸಿಗೆಗಳು ಖಾಲಿ ಇವೆ ಎಂದು ಮಾಹಿತಿ ಹಾಕುತ್ತಿವೆ.

ಆದರೆ, ಪಾಲಿಕೆ ವೈದ್ಯರು ಕೋವಿಡ್ ರೋಗಿಗಳನ್ನು ಆ ಆಸ್ಪತ್ರೆಗಳಿಗೆ ಕಳುಹಿಸಿದರೆ, ಅವರು ಹಾಸಿಗೆಗಳು ಖಾಲಿ ಇಲ್ಲ ಎಂದು ರೋಗಿಗಳನ್ನು ವಾಪಾಸ್ ಕಳಿಹಿಸುತ್ತಿದ್ದಾರೆ. ರಿಯಲ್ ಟೈಮ್ಸ್ ಅನ್ನು ಹಾಕದೇ ಅತ್ತ ಸರ್ಕಾರವನ್ನು ಇತ್ತ ಜನರನ್ನು ಹಾದಿ ತಪ್ಪಿಸುತ್ತಿವೆ. ಸುಳ್ಳು ಮಾಹಿತಿ ನೀಡುತ್ತಿವೆ. ಇಂಥ ಆಸ್ಪತ್ರೆಗಳ ವಿರುದ್ಧ ನೇರವಾಗಿ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಉಪ ಮುಖ್ಯಮಂತ್ರಿ ಅಧಿಕಾರಿಗಳಿಗೆ ಖಡಕ್ಕಾಗಿ ಸೂಚಿಸಿದರು.

ನಗರದಲ್ಲಿರುವ ಸುಮಾರು 400ಕ್ಕೂ ಹೆಚ್ಚು ಆಸ್ಪತ್ರೆಗಳಿಗೆ ತಲಾ ಒಬ್ಬರಂತೆ 'ಆಪ್ತಮಿತ್ರ' ಸಿಬ್ಬಂದಿಯನ್ನು ನೇಮಿಸಲಾಗಿದೆ. ಇವರು ಏನು ಮಾಡುತ್ತಿದ್ದಾರೆ ಎಂದು ಗರಂ ಆದ ಅವರು ಈ ಸಿಬ್ಬಂದಿ ಸೇರಿ ಹಿರಿಯ ಅಧಿಕಾರಿಗಳು ಇಂಥ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿ, ತಪ್ಪು ಸುಳ್ಳು ಕಂಡುಬಂದರೆ ಸ್ಥಳದಲ್ಲೇ ಕ್ರಮ ಜರುಗಿಸಿ ನಿಮ್ಮ ಜೊತೆ ಸರ್ಕಾರವಿದೆ ಎಂದು ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೋವಿಡ್ ಹಿನ್ನೆಲೆಯಲ್ಲಿ ಹೊಸದಾಗಿ ನೇಮಕವಾಗುತ್ತಿರುವ ಗುತ್ತಿಗೆ ವೈದ್ಯರಿಗೆ ರೂ.80 ಸಾವಿರ ಮಾಸಿಕ ವೇತನ ನಿಗದಿ ಮಾಡಲಾಗಿದೆ. ಇದೇ ರೀತಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಹಾಲಿ ಗುತ್ತಿಗೆ ವೈದ್ಯರಿಗೆ ರೂ.60 ಸಾವಿರ ವೇತನ ನೀಡಲಾಗುತ್ತಿದ್ದು, ರೂ.20 ಸಾವಿರ ಕೋವಿಡ್ ಭತ್ಯೆ ಸೇರಿಸಿ ರೂ.80 ಸಾವಿರ ವೇತನ ನೀಡಿ ಇದನ್ನು ಕೂಡಲೇ ಮಾಡಿ ಎಂದು ಉಪ ಮುಖ್ಯಮಂತ್ರಿ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಎನ್‌ಎಂಗಳಿಗೂ ವೇತನದ ಜೊತೆಗೆ ರೂ.5,000 ಕೋವಿಡ್ ಭತ್ಯೆ ನೀಡಲು ಸೂಚಿಸಿದರಲ್ಲದೇ, ಕೋವಿಡ್ ವಾರಿಯರ್‌ಗಳಾಗಿ ಕೆಲಸ ಮಾಡುತ್ತಿರುವ ಸ್ವಯಂ ಸೇವಕರಿಗೂ ಹಾಗೂ ಗಂಟಲು ಸಂಗ್ರಹ ಮಾಡುವ ಲ್ಯಾಬ್ ಟೆಕ್ನಿಷಿಯನ್‌ಗಳಿಗೂ ಕೋವಿಡ್ ಭತ್ಯೆ ನೀಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸುವಂತೆ ಉಪ ಮುಖ್ಯಮಂತ್ರಿ ಡಾ: ಅಶ್ವತ್ಥ ನಾರಾಯಣ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತೀಚೆಗೆ ಹೆಚ್ಚುತ್ತಿರುವ ಸಾವುಗಳು ಕೋವಿಡ್‌ನಿಂದ ಆಗುತ್ತಿವೆಯೇ ಅಥವಾ ಸೋಂಕು ತಗುಲಿದ ಮೇಲೆ ತಡವಾಗಿ ಬಂದು ಚಿಕಿತ್ಸೆ ಪಡೆದಿದ್ದರಿಂದ ಆಗುತ್ತಿವೆಯೇ ಇಲ್ಲವೇ ಬೇರೆ ಯಾವುದಾದರೂ ಕಾಯಿಲೆಯಿಂದ ಮೃತಪಟ್ಟರೆ ಎಂಬ ಬಗ್ಗೆ ವಿಶ್ಲೇಷಣೆ ನಡೆಸಿ ವರದಿ ನೀಡುವಂತೆ ಅವರು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಆಧಾರ:ವಿಶ್ವವಾಣಿ, ದಿನಾಂಕ:03.08.2020